**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ: ಎ2/ಅರ್ಜಿ ಸಮಿತಿ/23/22-23 ದಿನಾಂಕ: 05.05.2023

ರವರಿಗೆ,
ರಾಜ್ಯದ ಎಲ್ಲಾ ಜಿಲ್ಲೆಗಳ
ಉಪನಿರ್ದೇಶಕರು(ಆಡಳಿತ).

ಮಾನ್ಯರೆ,

ವಿಷಯ: ಶಾಲಾ ದಾಖಲಾತಿಗಳಲ್ಲಿ ವಿದ್ಯಾರ್ಥಿಯ ಹೆಸರು, ಪೋಷಕರ ಹೆಸರು, ಜನ್ಮ ದಿನಾಂಕ/ಇತರೆ ತಿದ್ದುಪಡಿ ಸಂಬಂಧ.

ಉಲ್ಲೇಖ: 1.ಸರ್ಕಾರಿ ಸುತ್ತೋಲೆ ಸಂಖ್ಯೆ:ಇಡಿ 100 ಡಿಟಿಬಿ 2014. ದಿನಾಂಕ:26.10.2015.
2.ಈ ಕಛೇರಿಯ ಸುತ್ತೋಲೆ ಸಂಖ್ಯೆ: ಮಾ.ಪ್ರ.ಪ.ಸಭೆ.ನಡವಳಿ/ಡಿಕ್ರಿ ಅನುಷ್ಠಾನ/30/19-20. ದಿನಾಂಕ: 03.02.2020.
3.ಶ್ರೀ.ಮೋಹನ್‌ಕುಮಾರ್ ಕೊಂಡಜ್ಜಿ, ಮಾನ್ಯ ವಿಧಾನ ಪರಿಷತ್ ಸದಸ್ಯರು, ರವರು ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಗೆ ಸಲ್ಲಿಸಿರುವ ಅರ್ಜಿ ಸಂಖ್ಯೆ:39/2022.
4.ಈ ಕಛೇರಿಯ ಪತ್ರ ಸಮ ಸಂಖ್ಯೆ ದಿನಾಂಕ: 15.02.2023.
5.ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು, ರವರ ಪತ್ರ ಸಂಖ್ಯೆ: ಇಪಿ 276 ಡಿಜಿಎಂ 2022. ದಿನಾಂಕ: 12.04.2023.

******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ ಉಲ್ಲೇಖ 3ರಲ್ಲಿ ಶ್ರೀ.ಮೋಹನ್‌ಕುಮಾರ್ ಕೊಂಡಜ್ಜಿ, ಮಾನ್ಯ ವಿಧಾನ ಪರಿಷತ್ ಸದಸ್ಯರು, ರವರು ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಗೆ ಸಲ್ಲಿಸಿರುವ ಅರ್ಜಿ ಸಂಖ್ಯೆ:39/2022 ರಲ್ಲಿ ಈ ಕೆಳಕಂಡಂತೆ ಮನವಿ ಸಲ್ಲಿಸಿರುತ್ತಾರೆ.

"ವಿದ್ಯಾರ್ಥಿಗಳ ಶಾಲಾ ದಾಖಲಾತಿಗಳಲ್ಲಿ ವಿದ್ಯಾರ್ಥಿ ಹೆಸರು/ಪೋಷಕರ ಹೆಸರುಗಳು ತಪ್ಪಾಗಿದ್ದಲ್ಲಿ ಸರಿಪಡಿಸಲು ಯಾವುದೇ ಸರ್ಕಾರದ ಆದೇಶಗಳು ಇರುವುದಿಲ್ಲ. ಕೇವಲ ಸುತ್ತೋಲೆ ಮಾತ್ರ ಇದ್ದು ನ್ಯಾಯಾಲಯಗಳ ಡಿಕ್ರಿ ಆದೇಶ ಅನುಷ್ಠಾನದ ಬಗ್ಗೆ ಸುತ್ತೋಲೆಯಲ್ಲಿರುತ್ತದೆ. ವಿದ್ಯಾರ್ಥಿ/ಪೋಷಕರ ಹೆಸರಿನಲ್ಲಿ Spelling, Initial & Surname ತಪ್ಪಾಗಿದ್ದಲ್ಲಿ ಇದನ್ನು ಸರಿಪಡಿಸಿಕೊಳ್ಳಲು ಸಾಧ್ಯವಾಗದೇ ಇರುವುದರಿಂದ ವಿದ್ಯಾರ್ಥಿಗಳಿಗೆ/ಪೋಷಕರುಗಳಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಆದುದರಿಂದ ತಾವುಗಳು ವಿದ್ಯಾರ್ಥಿ/ಪೋಷಕರ ಹೆಸರಿನಲ್ಲಿ Spelling, Initial & Surname ತಪ್ಪಾಗಿದ್ದಲ್ಲಿ ಇದನ್ನು ಸರಿಪಡಿಸಿಕೊಳ್ಳಲು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿಯೇ ಅಗತ್ಯವಿರುವ ಅಫಿಡವಿಟ್ ಮತ್ತು ಸರ್ಕಾರದಿಂದ ನೀಡಿರುವ ಬೇರೆ ಅಗತ್ಯ ದಾಖಲಾತಿಗಳನ್ನು ಪಡೆದು ಸರಿಪಡಿಸಲು ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಅಧಿಸೂಚನೆ ಹೊರಡಿಸುವಂತೆ ವಿನಂತಿಸಿರುತ್ತಾರೆ."

ಈ ಹಿನ್ನಲೆಯಲ್ಲಿ ವಿದ್ಯಾರ್ಥಿ/ಪೋಷಕರ ಹೆಸರಿನಲ್ಲಿ Spelling, Initial & Surname /ಜನ್ಮದಿನಾಂಕ/ಜಾತಿ/ಇತರೆ ತಿದ್ದುಪಡಿಗಳಿಗೆ ಸಂಬಂಧಿಸಿದಂತೆ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿಯೇ ಅಗತ್ಯವಿರುವ ಅಫಿಡವಿಟ್ ಮತ್ತು ಉಲ್ಲೇಖ(1)ರ ಸುತ್ತೋಲೆಯಲ್ಲಿ ಸೂಚಿಸಿರುವ ಅಗತ್ಯ ದಾಖಲಾತಿಗಳನ್ನು ಪಡೆದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಸೂಕ್ತಕ್ರಮವಹಿಸುವ ಅಧಿಕಾರ ವಹಿಸುವ ಕುರಿತು ಸೂಕ್ತ ಅಧಿಸೂಚನೆ ಹೊರಡಿಸಿಕೊಡಲು ಉಲ್ಲೇಖ 4 ರ ಪತ್ರದಲ್ಲಿ ಸರ್ಕಾರಕ್ಕೆ ಕೋರಲಾಗಿರುತ್ತದೆ.

ತಿದ್ದುಪಡಿ ಪ್ರಕರಣಗಳಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಉಲ್ಲೇಖ 1 ರಲ್ಲಿ ಸರ್ಕಾರ ಸುತ್ತೋಲೆ ಹೊರಡಿಸಿದ್ದು, ಜನ್ಮ ದಿನಾಂಕ ತಿದ್ದುಪಡಿ ಸಂಬಂಧ ಉಲ್ಲೇಖ 2 ರಲ್ಲಿ ಸುತ್ತೋಲೆಯನ್ನು ಮಂಡಲಿಯಿಂದ ಈಗಾಗಲೇ ಹೊರಡಿಸಲಾಗಿದೆ.

ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರವರು ಮಾನ್ಯ ನ್ಯಾಯಾಲಯಗಳಿಂದ ಡಿಕ್ರಿ ಆದೇಶದಂತೆ ತಿದ್ದುಪಡಿ ಕ್ರಮಗಳನ್ನು ಕೈಗೊಳ್ಳುವ ಸಂದರ್ಭದಲ್ಲಿ ಉಂಟಾಗುತ್ತಿರುವ ಅಡಚಣೆಗಳ ಕುರಿತು ನಿಯಮಾನುಸಾರ ಪರಿಶೀಲಿಸಿ ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರುಗಳಿಂದ ವಿವರವಾದ ವರದಿಯನ್ನು ಪಡೆದು ನೀಡಲು ಉಲ್ಲೇಖ 5 ರಂತೆ ಆದೇಶಿಸಿರುವ ಮೇರೆಗೆ, ಆಯಾ ಜಿಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಸರ್ಕಾರದ ಸುತ್ತೋಲೆಯನ್ವಯ ಮಾನ್ಯ ನ್ಯಾಯಾಲಯಗಳ ಡಿಕ್ರಿ ಆದೇಶದಂತೆ ತಿದ್ದುಪಡಿ ಕ್ರಮಗಳನ್ನು ಕೈಗೊಳ್ಳುವ ಸಂದರ್ಭದಲ್ಲಿ ಉಂಟಾಗುತ್ತಿರುವ ಅಡಚಣೆಗಳ ಕುರಿತು ವಿವರವಾದ ವರದಿಯನ್ನು ದಿನಾಂಕ: 12.05.2023 ರೊಳಗಾಗಿ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

ತಮ್ಮ ನಂಬುಗೆಯ

(ಗೋಪಾಲಕೃಷ್ಣ.ಹೆಚ್.ಎನ್) 5/5/2023

ನಿರ್ದೇಶಕರು, ಪರೀಕ್ಷೆಗಳು

ಗೆ,

1.ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ, ರವರಿಗೆ ಜರೂರು ವರದಿ ಸಲ್ಲಿಸಲು ತಿಳಿಸಿದೆ.

ಪ್ರತಿಯನ್ನು:

1.ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.

2.ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು, ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.

3.ಕಛೇರಿ ಪ್ರತಿ.